# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ/ವಾರ್ಡ್ ಸಮಿತಿ ಸಹಾಯಕಅಭಿಯಂತರರಕಛೇರಿ ವಾರ್ಡ್ ಸಂಖ್ಯೆ: 136 ಜೆ.ಜೆ.ಆರ್ ನಗರ ಬೆಂಗಳೂರು

*****************************************************************************************

ಸಂಖ್ಯೆ: w-136/Committee/Proceding -25/2021-22 dt. 22-10-2021

## ಸಭೆಯ ನಡವಳಿಗಳು

ಶ್ರೀ ಸತೀಶ್ ಕುಮಾರ್ ಸಮಿತಿಯ ಕಾರ್ಯದರ್ಶಿಗಳು ಸಭೆಯನ್ನು ನಡೆಸುತ್ತಾ ಸಭೆಯಲ್ಲಿ ಉಪಸ್ಥಿತಗೊಂಡ ಮಾನ್ಯ ನೋಡಲ್ ಆಧಿಕಾರಿಗಳಿಗೆ ಮತ್ತು ಉನ್ನತ ಸಭೆಯಲ್ಲಿ ಅಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಸಭೆಗೆ ಸ್ವಾಗತಕೋರಿದರು. ನಂತರ ಮಾನ್ಯ ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು

## ಸಭೆಯಲ್ಲಿಚರ್ಚಿಸಲಾದ ವಿಷಯಗಳು

ಮೊದಲಿಗೆ ಈ ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳ ಬಗ್ಗೆ ಗಮನಹರಿಸುತ್ತಾ ಹಾಗೂ ಸಾರ್ವಜನಿಕರಿಂದ ಬಂದ ದೂರುಗಳನ್ನು ಪರಿಹರಿಸಿದ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಅಧ್ಯಕ್ಷರು ಪ್ರತಿ ನಿತ್ಯ ಬಿ.ಬಿ.ಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಹಾಜರಾತಿ ಪುಸ್ತಕ ಮತ್ತು ವಾಹನಗಳ ಹಾಜರಾತಿಯ ವಿವರವನ್ನು ನೀಡುವಂತೆ ಸಭೆಯಲ್ಲಿ ತಿಳಿಸಿದರು.

ಕಿರಿಯ ಆರೋಗ್ಯ ಪರಿವೀಕ್ಷರು ವಾರ್ಡ್ –136ರ ವ್ಯಾಪ್ತಿಯಲ್ಲಿ ಬರುವ ಬಿ.ಬಿ.ಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಹಾಜರಾತಿ ಪುಸ್ತಕ ಮತ್ತು ವಾಹನಗಳ ಹಾಜರಾತಿ ಪುಸ್ತಕವನ್ನು ಸಭೆಯಲ್ಲಿ ನೀಡಿದರು ಹಾಗೂ ಹಲವು ಹಬ್ಬ ಹರಿದಿನಗಳು ಹೆಚ್ಚಿಗಿರುವುದರಿಂದ ಕಸ ವಿಲೇವಾರಿ ಘಟಕಗಳಲ್ಲಿ ಮಿಶ್ರಕಸ ವಿಲೇವಾರಿಯಾಗದಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು

ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಾಮಗಾರಿಗಳ ವಿವರ ಸಭೆಗೆ ನೀಡುವಂತೆ ಕೋರಿದರು ಹಾಗೂ ಅವಶ್ಯಕವಾಗಿ ನಡೆಯಬೇಕಾದ ಕಾಮಗಾರಿಗಳ ಬಗ್ಗೆ ವಿವರಣೆ ಕೋರಿದರು

ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್‌ನಲ್ಲಿ ನಡೆಯುತ್ತಿರುವ ಕಾಮಗಾರಿಗಳ ವಿವರವನ್ನು ನೀಡಿದರು.

ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳು ಕಂಡುಬಂದಿರುವ ಬಗ್ಗೆ ಸಭೆಯಲ್ಲಿ ಪ್ರಸ್ತಪಿಸಿದರು.ಈ ವಿಷಯದ ಬಗ್ಗೆ ಮಾನ್ಯ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆಯಲ್ಲಿ ಗುಂಡಿಗಳನ್ನು ಮುಚ್ಚಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ಹಲವು ದಿನಗಳಿಂದ ಮಳೆಯ ಪ್ರಮಾಣದ ಹೆಚ್ಚಗಿದ್ದು ವಾರ್ಡ್ ವ್ಯಾಪ್ತಿಯಲ್ಲಿ ಕಟ್ಟಡ ಕುಸಿತ ಹಾಗೂ ಮಳೆ ಹಾನಿಯ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು

ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್ ವ್ಯಾಪ್ತಿಯಲ್ಲಿ ಶೀಥಿಲಗೊಂಡ 5ನೇ ಅಡ್ಡರಸ್ತೆ ವಿನಾಯಕ ನಗರದಲ್ಲಿ ಕಟ್ಟಡ ಗುರ್ತಿಸಿ ನೋಟಿಸ್ ನೀಡಲಾಗಿದೆ ಹಾಗೂ ಮಳೆಗಾಲದಲ್ಲಿ ರಾತ್ರಿ ಪಾಳಿಯಲ್ಲಿ ಕೆಲಸ ಗಾರರನ್ನು ಮತ್ತು ಟ್ರಾಕ್ಟರ್ ಉಪಯೋಗಿಸಿಕೊಂಡು ಕಾರ್ಯನಿರ್ವಹಿಸುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಮಾನ್ಯ ಸದಸ್ಯರು ಮಳೆಗಾಲವು ವಾಯುಭಾರ ಕುಸಿತದಿಂದ ಹೆಚ್ಚಿನ ಪ್ರಮಾಣದಲ್ಲಿ ಮಳೆ ಬರುತ್ತಿರುವುದರಿಂದ ಹಾಗೂ ದೂರುಗಳು ಹೆಚ್ಚಿನ ಪ್ರಮಾಣದಲ್ಲಿ ಬರುತ್ತಿರುವುದರಿಂದ ಮಳೆಗಾಲದಲ್ಲಿ ತೆರೆಯಲಾದ ಕಂಟ್ರೋಲ್ ರೂಂ ಮುಂದುವರಿಸುವಂತೆ ಕೋರಿದರು.

ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ಕಂಟ್ರೋಲ್ ರೂಂ ಮುಂದುವರಿಸುವಂತೆ ಮೇಲಾಧಿಕಾರಿಗಳಿಗೆ ಪತ್ರ ಬರೆದು ಕೋರುವುದಾಗಿ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು: ಬಿಡಬ್ಲೂಎಸ್ಎಸ್‌ಬಿ ಕಛೇರಿಗೆ ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರಿಂದ ಬಂದ ದೂರಿನ ಪುಸ್ತಕವನ್ನು ಪರಿಶೀಲಿಸಿದರು ಹಾಗೂ ಕೈಗೊಂಡ ಕ್ರಮಗಳ ವಿವರವನ್ನು ಕೋರಿದರು

ಬಿಡಬ್ಲೂಎಸ್‌ಎಸ್‌ಬಿ ಅಧಿಕಾರಿಗಳು ವಾರ್ಡ್ 136 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು ಮತ್ತು ಸಾರ್ವಜನಿಕರಿಗೆ ತೊಂದರೆಯಾಗದಂತೆ ಕುಡಿಯುವ ನೀರು ಮತ್ತು ಒಳಚರಂಡಿ ವ್ಯವಸ್ಥೆಯನ್ನು ಮಾಡುವುದಾಗಿ ತಿಳಿಸಿದರು.

ಅಧ್ಯಕ್ಷರು ಬೆಸ್ಕಂ ಕಛೇರಿಗೆ ವಾರ್ಡ್ 136 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ತಿಳಿಸುವಂತೆ ಸಭೆಯಲ್ಲಿ ತಿಳಿಸಿದರು.

ಬೆಸ್ಕಂ ಅಧಿಕಾರಿಯವರು ವಾರ್ಡ್ 136ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರುಗಳ ವಿವರ ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು.

ಮಾನ್ಯ ಅಧ್ಯಕ್ಷರು ಕಂದಾಯ ಅಧಿಕಾರಿಗಳಿಗೆ ಮತದಾನದ ಗುರ್ತಿನ ಚೀಟಿ ವಿತರಿಸುವ ಮತ್ತು ಹೊಸ ಮತದಾರರ ಗುರ್ತಿನ ಚೀಟಿ ನೋಂದಣಿಯ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು

ಕಂದಾಯ ಅಧಿಕಾರಿಗಳು ಗುರ್ತಿನ ಚೀಟಿಯನ್ನು ಭೂತ್ ಮಟ್ಟದ ಏಜೆಂಟ್ ಗಳಿಂದ ವಿತರಿಸಲುಗುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಬಗ್ಗೆ ಸಭೆಯಲ್ಲಿ ವಿವರಣೆ ಮತ್ತು ಕೈಗೊಂಡಿರುವ ಕ್ರಮದ ಬಗ್ಗೆ ಸಭೆಯಲ್ಲಿ ವಿವರಣೆ ನೀಡಿದರು.

ಆರೋಗ್ಯ ಪರಿವೀಕ್ಷಕರು ವಾಡ್-136 ಮತ್ತು ಕಂದಾಯ ಪರಿವೀಕ್ಷರು ವಾರ್ಡ್-136 ರವರುಗಳಿಗೆ ಕೋವಿಡ್-19 ಪೂರ್ಣ ಪ್ರಮಾಣದಲ್ಲಿ ತಗ್ಗಿದ್ದು ವಾರ್ಡ್ ನಲ್ಲಿ ಲಸಿಕೆ ಅಭಿಯಾನ ಕಾರ್ಯಕ್ರಮ ಉತ್ತಮ ರೀತಿಯಲ್ಲಿ ಸಾರ್ವಜನಿಕರು ಸ್ಪಂಧಿಸುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು

ಮಾನ್ಯ ಅಧ್ಯಕ್ಷರು ವಾರ್ಡ್ 136ರ ವ್ಯಾಪ್ತಿಯಲ್ಲಿ ಮಾಷಲ್‌ಗಳು ವಿಧಿಸಿದ ದಂಡದ ವಿವರವನ್ನು ಕೋರಿದರು.

ವಾರ್ಡ್-136ರ ಮಾಷಲ್ ಗಳು ಒಟ್ಟು ವಿಧಿಸಿದ ದಂಡ ರೂ. 16500 ಎಸ್ ಡಬ್ಲೂಎಂ. ದಂಡ ರೂ. 11250 ಎಂದು ಸಭೆಯಲ್ಲಿ ತಿಳಿಸಿದರು ಸದರಿ ಹಣವನ್ನು ಮುಖ್ಯ ಕಛೇರಿಗೆ ಸಲ್ಲಿಸಿರುತ್ತಾರೆ.

ಸಭೆಯಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು. ಸಭೆಯ ನಡಾವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು.

| ಕ್ರಮ ಸಂಖ್ಯೆ | ವಾರ್ಡ್ ಹಂತದ ಸಮೀತಿ ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ | | ಸಹಿ |
|---|---|---|---|
| 1 | ಡಾ।। ಅಲ್ಲಮಪ್ರಭು, ದೂ. 9480685654<br>ಸಹಾಯಕ ನಿರ್ದೇಶಕರು (ಪಶುಪಾಲನೆ ಪಶ್ಚಿಮ) ಬಿ.ಬಿ.ಎಂ.ಪಿ. | ವಾರ್ಡ್‌ನ ನೋಡಲ್ ಅಧಿಕಾರಿ | 22/10/2021 |
| 2 | ಶ್ರೀ ಸತೀಶ್ ಕುಮಾರ್<br>ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ: 136<br>ಬಿ.ಬಿ.ಎಂ.ಪಿ ದೂ. 9986740382 | ಸದಸ್ಯ ಕಾರ್ಯದರ್ಶಿ | |
| 3 | ಎನ್. ಲಕ್ಷ್ಮಿ ನರಸಿಂಹಯ್ಯ ದೂ. 9845563157<br>ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ -136 | ಸದಸ್ಯರು | 22/10/21 |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರ(ಕಾಮಗಾರಿ) ಜೆ.ಜೆ.ಆರ್ ನಗರ ಉಪ ವಿಭಾಗದ ಪ್ರತಿನಿಧಿ<br>ಶ್ರೀ ಬಾಬು (ಕೆಲಸ ಪರಿವೀಕ್ಷಕರು) 9342582372 | ಸದಸ್ಯರು | |
| 5 | ಆರೋಗ್ಯಾಧಿಕಾರಿಗಳು, ಚಾಮರಜಪೇಟೆ ವಿಭಾಗ ರವರ ಪ್ರತಿನಿಧಿ.<br>ಎನ್. ಲಕ್ಷ್ಮಿ ನರಸಿಂಹಯ್ಯ ದೂ. 9845563157 | ಸದಸ್ಯರು | 22/10/21 |
| 6 | ಶ್ರೀ ಉಮೇಶ್<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ ದೂ. 873557760 | ಸದಸ್ಯರು | |
| 7 | ಶ್ರೀ ಮೊಹಮದ್ ಮುಜಾಮೀಲ್<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ ದೂ. 7349649906 | ಸದಸ್ಯರು | |
| 8 | ಶ್ರೀಮತಿ ಚಂದ್ರಕಲಾ ದೂ. 8904845720<br>ಕಂದಾಯ ಪರಿವೀಕ್ಷಕರು, ವಾರ್ಡ್ ನಂ. 136 | ಸದಸ್ಯರು | |
| 9 | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ರವರ ಪ್ರತಿನಿಧಿಎನ್ ಎನ್. ಲಕ್ಷ್ಮಿ ನರಸಿಂಹಯ್ಯ<br>ದೂ. 9845563157 | ಸದಸ್ಯರು | 22/10/21 |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರ ( ಬಿಡಬ್ಲೂ.ಎಸ್.ಎಸ್.ಬಿ) ರವರ ಪ್ರತಿನಿಧಿ<br>ಕುಮಾರ ಸ್ವಾಮಿ, ದೂ. 9060341644 | ಸದಸ್ಯರು | 22/10/21 |
| 11 | ಸಹಾಯಕ ಕಾರ್ಯ ಪಾಲಕ ಅಭಿಯಂಣತರರು(ಬೆಸ್ಕಂ) ರವರ ಪ್ರತಿನಿಧಿ | ಸದಸ್ಯರು | 22/10/21 |
| 12 | ಮಾಗಡಿ ರಸ್ತೆ ಸಂಚಾರ ಪೊಲೀಸ್ ಠಾಣೆ ಯ ಪ್ರತಿನಿಧಿ<br>ಶ್ರೀ ರಾಮಚಂದ್ರ ಎ. ಎ.ಎಸ್.ಐ ದೂ.9902992624 | ಸದಸ್ಯರು | |
| 13 | ಜೆ.ಜೆ.ಆರ್ ನಗರ ಪೊಲೀಸ್ ಠಾಣೆ ಯ ಪ್ರತಿನಿಧಿ | ಸದಸ್ಯರು | ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಜೆ.ಜೆ.ನಗರ ಪೊಲೀಸ್ ಠಾಣೆ ಬೆಂಗಳೂರುನಗರ |
| 14 | ಮಾಷಲ್ ವಾರ್ಡ್-136 | | |

22/10/2021

ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 136
ವಾರ್ಡ್ ಹಂತದ ಸಮೀತಿ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿ
ವಾರ್ಡ್ ಹಂತದ ಸಮಿತಿ, ವಾರ್ಡ್ ನಂ. 136